# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 07-05-2022 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ),
4. ಶ್ರೀ.ಮಹಾಂತೇಶ್ ಉಜ್ಜನಿಕೊಪ್ಪ ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೊಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ -01ರಲ್ಲಿನ ದಿನಾಂಕ: 18-5-2022 ರಂದು ಯಲಹಂಕ ಗ್ರಾಮದಲ್ಲಿ ಕರಗ ಮಹೋತ್ಸವ ಕಾರ್ಯಕ್ರಮ ಇರುವುದರಿಂದ ವಾರ್ಡ್ ನಂ -01ರ ಪ್ರದೇಶಗಳಲ್ಲಿನ ಮುಖ್ಯ ಮತ್ತು ಅಡ್ಡರಸ್ತೆಗಳಲ್ಲಿ ಸ್ವಚ್ಚತೆ ಕಾರ್ಯ ಕೈಗೊಳ್ಳುವಂತೆ ಸಂಬಂದಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೊಡೆಲ್ ಅಧಿಕಾರಿಗಳು ಸೂಚಿಸಿದರು.

2. ಕೆಂಪೇಗೌಡ ವಾರ್ಡ್ ವಾರ್ಡ್ ನಂ-01ರ ಸರ್ಕಾರಿ ಆಸ್ಪತ್ರೆ ಮುಂಭಾಗದಲ್ಲಿ ಯಲಹಂಕ 401 ಬಸ್ ನಿಲ್ದಾಣ ಮತ್ತು ಬಿ.ಬಿ.ರಸ್ತೆಯ ಅಪೂರ್ವ ಆಸ್ಪತ್ರೆ ಮುಂಭಾಗ ಮತ್ತು ಶುಶ್ರೂಷ ಆಸ್ಪತ್ರೆ ಮುಂಭಾಗ ಕಸದ ರಾಶಿಯನ್ನು ಸ್ವಚ್ಛಗೊಳಿಸಿರುವುದಿಲ್ಲವೆಂದು ಶ್ರೀ.ಹೇಮರಾಜ್ ರವರು ಸಭೆಯಲ್ಲಿ ಅಕ್ಷೇಪಣೆ ವ್ಯಕ್ತಪಡಿಸಿದರು. ಆಳವಡಿಸುವಂತೆ ಸ್ಥಳೀಯ ಸಾರ್ವಜನಿಕರು ಪ್ರಸ್ತಾವನೆ ಸಲ್ಲಿಸಿದರು.

3. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಅಂಗಡಿಗಳಲ್ಲಿ ಪ್ಲಾಸ್ಟಿಕ್‌ಗಳನ್ನು ಬಳಸುತ್ತಿದ್ದು, ಇದನ್ನು ಕೂಡಲೇ ವಿಕ್ಷಣೆ ಮಾಡಿ ಸದರಿ ಅಂಗಡಿಗಳ ಮಾಲೀಕರಿಗೆ ದಂಡ ವಿಧಿಸಿ ಪ್ಲಾಸ್ಟಿಕ್‌ಗಳನ್ನು ಜಪ್ತಿಮಾಡಿಕೊಳ್ಳಬೇಕೆಂದು ಹಾಗೂ ಅಂಗಡಿಗಳಿಗೆ ಪರವಾನಗಿ ನೀಡಲು ಸ್ಥಳೀಯರು ಸಭೆಯಲ್ಲಿ ಕೋರಿದರು.

4. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಸುರಬಿ ಬಡಾವಣೆಯ ರೈತರ ಸಂತೆ ಜಕ್ಕೂರು ಮುಖ್ಯರಸ್ತೆಯ ಗಣ್ಯವ್ಯಕ್ತಿಗಳು ಪ್ರತಿ ದಿನ ಸಂಚಾರ ಮಾಡುವುದರಿಂದ ಈ ರಸ್ತೆಗಳನ್ನು ಸ್ವಚ್ಚತಾ ಮಾಡುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

5. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಮಾರುತಿನಗರ 1ನೇ ಮುಖ್ಯರಸ್ತೆಯಲ್ಲಿರುವ ಬ್ಲಾಕ್ ಸ್ಪಾರ್ಟ್ ಇದ್ದು, ಇದರಲ್ಲಿ ಕಸವನ್ನು ತೆಗೆದಿರುವುದಿಲ್ಲ ಎಂದು ಸಾರ್ವಜನಿಕರು ಸಭೆಯಲ್ಲಿ ದೂರನ್ನು ಸಲ್ಲಿಸಿದರು.

6. ರೈತರ ಸಂತೆಯಿಂದ ವಾರ್ಡ್‌ನ ಪರಿಮಿತಿಯವರೆಗೆ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿ ಮುಗ್ಗಟ್ಟುಗಳನ್ನು ತೆರವುಗೊಳಿಸುವುದಕ್ಕೆ ತೆರವುಕಾರ್ಯಾಚರಣೆ ಮಾಡಲು ಸಭೆಯಲ್ಲಿ ಚರ್ಚಿಸಿ ದಿನಾಂಕ ನಿಗಧಿಪಡಿಸಲಾಯಿತು.

7. ವೆಂಕಟಾಲ ಜನತಾ ಕಾಲೋನಿಯಲ್ಲಿ ವಿದ್ಯುತ್ ಕಂಭಗಳನ್ನು ಆಳವಡಿಸಲು ಮತ್ತು ಕೆಲವು ರಸ್ತೆಗಳಲ್ಲಿನ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವುದು ಮತ್ತು ಡೌನ್ ಬಜಾರ್ ರಸ್ತೆಯ ಅಕ್ಕಪಕ್ಕದ ಚರಂಡಿಗಳಲ್ಲಿ ಶೋಲ್ಡ್‌ರ್ ಡ್ರೈನ್‌ಗಳನ್ನು ಸ್ವಚ್ಚಗೊಳಿಸುವಂತೆ ಸ್ಥಳೀಯರು ಸಭೆಯಲ್ಲಿ ಕೋರಿದರು.

8. ಕೋಗಿಲು ವೃತ್ತದ ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ತೆಗೆದು ಮಳೆನೀರು ಸರಾಗವಾಗಿ ಹರಿಯುವಂತೆ ಮಾಡಲು ಸಂಬಂದಿಸಿದ ವಾರ್ಡ್‌ನ ಅಭಿಯಂತರರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು | ವಾರ್ಡ್‌ನ ನೋಡೆಲ್ ಅಧಿಕಾರಿಗಳು |
| ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ) | ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ) |

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಾಮುಸಂಜೀವಯ್ಯ, ನೋಡಲ್ ಅಧಿಕಾರಿಗಳು.

**ಅಧಿಕಾರಿಗಳ ಮಾಹಿತಿಗಾಗಿ.**

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.